ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ವಸತಿ ಯೋಜನೆಯಲ್ಲಿ ಮನೆ ನಿರ್ಮಾಣದ ಪ್ರಗತಿ ಬಗ್ಗೆ

ಶ್ರೀಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

1125 (1313) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2018-19, 2019-20ನೇ ಸಾಲಿನಲ್ಲಿ ಕಾರವಾರ ಜಿಲ್ಲೆಯಲ್ಲಿ ಯಾವ ಯಾವ ವಸತಿ ಯೋಜನೆಗಳಡಿ ವಸತಿಗಳನ್ನು ನಿರ್ಮಿಸಲು ನಗರ ಸ್ಥಳೀಯ ಸಂಸ್ಥೆಗಳಿಗೆ ನೀಡಲಾಗಿರುವ ಗುರಿಯ ಪ್ರಮಾಣ ಎಷ್ಟು; ಸಾಧಿಸಿದ ಪ್ರಗತಿ ಎಷ್ಟು;

(ಆ) ಗ್ರಾಮೀಣ ಪ್ರದೇಶದಲ್ಲಿನ ಮನೆ ನಿರ್ಮಾಣ ಪ್ರಗತಿಗೂ ನಗರ ಪ್ರದೇಶಗಳ ಮನೆ ನಿರ್ಮಾಣ ಪ್ರಗತಿಗೂ ಸಾಕಷ್ಟು ವ್ಯತ್ಯಾಸ ಕಂಡು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಕ್ರಮಗಳನ್ನು ತ್ವರಿತ ಪ್ರಗತಿಗಾಗಿ ಅನುಸರಿಸಲಾಗುತ್ತಿದೆ? (ತಾಲ್ಲೂಕುವಾರು/ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)